All India Radio: Bangalore
Regional Bulletin In Kannada
23.02.2026 / 6.40 p.m.
ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

ಮುಖ್ಯಾಂಶಗಳು

- ದೇಶದಲ್ಲಿ ಮನ್ರೇಗಾ ಮರುಸ್ಥಾಪನೆಗೆ ಕಾಂಗ್ರೆಸ್ ಹೋರಾಟ- ಮುಖ್ಯಮಂತ್ರಿ ಸಿದ್ದರಾಮಯ್ಯ
- ೨೦೨೬ರ ಕೇಂದ್ರ ಆಯವ್ಯಯ ಕುರಿತು ಬೆಂಗಳೂರಿನಲ್ಲಿ ಕೈಗಾರಿಕೋದ್ಯಮಿಗಳೊಂದಿಗೆ ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಸಂವಾದ
- ಪರಿಶಿಷ್ಟಜಾತಿ - ಒಳಮೀಸಲಾತಿ ಜಾರಿ ಸಂಬಂಧ ಸರ್ಕಾರದ ಧೋರಣೆ ಕುರಿತು ರಾಜ್ಯಪಾಲರನ್ನು ಭೇಟಿ ಮಾಡಿದ ಬಿಜೆಪಿ ನಿಯೋಗ
- ಅರಣ್ಯದಂಚಿನ ಪ್ರದೇಶಗಳಲ್ಲಿ ವನ್ಯಜೀವಿ ಸಂಚಾರ ಕುರಿತು ಸ್ಥಳೀಯರಿಗೆ ಮಾಹಿತಿ ರವಾನೆಗೆ ಕ್ರಮ- ಅರಣ್ಯ ಸಚಿವ ಈಶ್ವರ್ ಖಂಡ್ರೆ

****************

’ವಿಕಸಿತ ಭಾರತ .ಜಿ.ರಾಮ್ ಜಿ’ ಯೋಜನೆಯನ್ನು ಕೇಂದ್ರ ಸರ್ಕಾರ ಜಾರಿ ಮಾಡಿರುವುದರಿಂದ ದೇಶದ ೧೨ ಕೋಟಿ ೧೬ ಲಕ್ಷ ಸಣ್ಣ ರೈತರು, ಆದಿವಾಸಿಗಳು, ಕೃಷಿ ಕೂಲಿ ಕಾರ್ಮಿಕರು ಹಾಗೂ ಮಹಿಳೆಯರಿಗೆ ಅನ್ಯಾಯವಾಗಿದ್ದು, ದೇಶದಲ್ಲಿ ಮನ್ರೇಗಾ ಮರುಸ್ಥಾಪನೆಯಾಗುವವರೆಗೂ ಕಾಂಗ್ರೆಸ್ ಪಕ್ಷ ಹೋರಾಟವನ್ನು ನಿಲ್ಲಿಸುವುದಿಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ.

ಚಿಕ್ಕಬಳ್ಳಾಪುರ ನಗರ ಹೊರವಲಯದ ಚದುಲಪುರ ಬಳಿ ಇಂದು ಕೆಪಿಸಿಸಿ ಹಮ್ಮಿಕೊಂಡಿದ್ದ ’ನರೇಗಾ ಬಚಾವೋ’ ಆಂದೋಲನಕ್ಕೆ ಚಾಲನೆ ನೀಡಿ ಮಾತನಾಡಿದ ಮುಖ್ಯಮಂತ್ರಿ, ಕೇಂದ್ರದಲ್ಲಿ ಬಿಜೆಪಿ ನೇತೃತ್ವದ ಸರ್ಕಾರ ಅಧಿಕಾರಕ್ಕೆ ಬಂದಾಗಿನಿಂದಲೂ ಬಡವರು, ರೈತರು, ಕೃಷಿ ಕೂಲಿ ಕಾರ್ಮಿಕರು, ಶ್ರಮಜೀವಿಗಳ ವಿರೋಧಿ ನೀತಿಯನ್ನು ಅನುಸರಿಸುತ್ತಿದೆ. ಮಹಾತ್ಮ

ಗಾಂಧೀಜಿಯವರ ಗ್ರಾಮ ಸ್ವರಾಜ್ಯದ ಕನಸನ್ನು ನನಸುಗೊಳಿಸಲು ಯುಪಿಎ ಸರ್ಕಾರ ಶ್ರಮಿಸಿತ್ತು ಎಂದು ಹೇಳಿದರು.

ಮನ್ರೇಗಾ ಮರು ಜಾರಿ, ಜನರ ಉದ್ಯೋಗದ ಹಕ್ಕುಗಳ ಮರುಸ್ಥಾಪನೆ, ನರೇಗಾ ಕೂಲಿ ಕನಿಷ್ಠ ೪೦೦ ರೂಪಾಯಿಗೆ ಏರಿಕೆ ಮತ್ತು ಗ್ರಾಮ ಪಂಚಾಯಿತಿಗಳ ಸ್ವಯಂ ಆಡಳಿತದ ಹಕ್ಕಿನ ಪುನರ್ ಸ್ಥಾಪನೆಯಂತಹ ಜನಪರ ಅಂಶಗಳನ್ನು ಇಟ್ಟುಕೊಂಡು ಕೇಂದ್ರ ಸರ್ಕಾರದ ವಿರುದ್ಧ ಕಾಂಗ್ರೆಸ್ ಪಕ್ಷ ಹೋರಾಟವನ್ನು ನಡೆಸಲಿದೆ. ಗ್ರಾಮೀಣ ಭಾಗದ ಉಳಿವಿಗಾಗಿ ಪ್ರತಿಯೊಬ್ಬರೂ ಈ ಹೋರಾಟಕ್ಕೆ ಕೈ ಜೋಡಿಸಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಕರೆ ನೀಡಿದರು.

ಧ್ವನಿ: ಮುಖ್ಯಮಂತ್ರಿ ಸಿದ್ದರಾಮಯ್ಯ

ಕಾರ್ಯಕ್ರಮದಲ್ಲಿ ಮಾತನಾಡಿದ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಮಹಾತ್ಮ ಗಾಂಧೀಜಿಯವರ ಹೆಸರನ್ನು ಜನಮಾನಸದಿಂದ ಅಳಿಸಲು ಯಾರಿಂದಲೂ ಸಾಧ್ಯವಿಲ್ಲ. ಮನ್ರೇಗಾ ಯೋಜನೆ ಜಾರಿಯಾದಾಗಿನಿಂದ ಇಂದಿನವರೆಗೆ ದೇಶದ ಗ್ರಾಮೀಣ ಪ್ರದೇಶಗಳಲ್ಲಿ ಲಕ್ಷಾಂತರ ಆಸ್ತಿಗಳು ಸೃಜನೆಯಾಗಿ ಅಭಿವೃದ್ಧಿಗೆ ಸಹಕಾರಿಯಾಗಿವೆ. ಇಂತ ಮಹತ್ವದ ಯೋಜನೆಯನ್ನು ಇಲ್ಲವಾಗಿಸಲು ಕೇಂದ್ರ ಸರ್ಕಾರ ಮುಂದಾಗಿರುವುದು ಖಂಡನೀಯ ಎಂದರು.

ಕಾರ್ಯಕ್ರಮದಲ್ಲಿ ಎಐಸಿಸಿ ಪ್ರಧಾನ ಕಾರ್ಯದರ್ಶಿಯೂ ಆಗಿರುವ ರಾಜ್ಯ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲಾ, ಕಾರ್ಯದರ್ಶಿ ಅಭಿಷೇಕ್ ದತ್ತ, ಸಚಿವರಾದ ಡಾ.ಎಂ.ಸಿ.ಸುಧಾಕರ್, ಕೃಷ್ಣಬೈರೇಗೌಡ, ಕೆ.ಹೆಚ್.ಮುನಿಯಪ್ಪ, ಬೈರತಿ ಸುರೇಶ್ ಹಾಗೂ ಕಾಂಗ್ರೆಸ್ ಶಾಸಕರು, ಮುಖಂಡರು ಭಾಗವಹಿಸಿದ್ದರು.

****************

ಬೆಂಗಳೂರಿನ ಪೀಣ್ಯ ಕೈಗಾರಿಕಾ ಮಂಡಳಿ ಆಯೋಜಿಸಿದ್ದ ೨೦೨೬ ರ ಕೇಂದ್ರ ಆಯವ್ಯಯ ಕುರಿತ ಕೈಗಾರಿಕೋದ್ಯಮಿಗಳು ಹಾಗೂ ಸದಸ್ಯರ ಜೊತೆಗಿನ ವಿಶೇಷ ಸಂವಾದ ಕಾರ್ಯಕ್ರಮದಲ್ಲಿಂದು ಕೇಂದ್ರ ಗ್ರಾಹಕ ವ್ಯವಹಾರಗಳ ಸಚಿವ ಪ್ರಲ್ಹಾದ್ ಜೋಶಿ ಪಾಲ್ಗೊಂಡರು.

ಕಾರ್ಯಕ್ರಮದಲ್ಲಿ ಸಚಿವರು ತಂತ್ರಜ್ಞಾನ ಮತ್ತು ಕೈಗಾರಿಕಾ ವಲಯದಲ್ಲಿ ಸ್ವಾವಲಂಬಿ ಭಾರತದ ನಿರ್ಮಾಣ, ಸ್ಟಾರ್ಟ್‌ಅಪ್ ಬೆಂಬಲ, ವಿನ್ಯಾಸ, ಆವಿಷ್ಕಾರ ಮತ್ತು ಉತ್ಪಾದನೆ ಮಾಡಲು ಅವಕಾಶ ಒದಗಿಸುತ್ತಿರುವ ಹಾಗೂ ಕೈಗಾರಿಕಾ ಅಭಿವೃದ್ಧಿಗೆ ಕೇಂದ್ರ ಸರ್ಕಾರದ ವಿವಿಧ ಯೋಜನೆಗಳ ಕುರಿತು ಮಾತನಾಡಿದರು.

೨೦೨೬ ರ ಕೇಂದ್ರ ಆಯವ್ಯಯ, ಭಾರತದ ಮುಂದಿನ ಭವಿಷ್ಯದ, ವಿಕಸಿತ ಭಾರತ ಹಾಗೂ ಆತ್ಮ ನಿರ್ಭರ ಭಾರತದತ್ತ ಮಹತ್ವದ ಹೆಜ್ಜೆಯಾಗಿದ್ದು, ಜಾಗತಿಕ ಮಟ್ಟದಲ್ಲಿ ಭಾರತ ಪ್ರಧಾನಮಂತ್ರಿ ನರೇಂದ್ರ ಮೋದಿಯವರ ನೇತೃತ್ವದಲ್ಲಿ ಚಾಪು ಮೂಡಿಸುತ್ತಿದೆ ಎಂದು ಸಭೆಯನ್ನುದ್ದೇಶಿಸಿ ಸಚಿವರು ತಿಳಿಸಿದರು.

ಈ ಸಂದರ್ಭದಲ್ಲಿ ಕೇಂದ್ರ ಸಣ್ಣ, ಅತಿ ಸಣ್ಣ ಮತ್ತು ಮಧ್ಯಮ ಉದ್ಯಮ ಗಳ ಖಾತೆ ರಾಜ್ಯ ಸಚಿವೆ ಶೋಭಾ ಕರಂದ್ಲಾಜೆ, ಶಾಸಕ ಎಸ್.ಮುನಿರಾಜು, ಪೀಣ್ಯ ಕೈಗಾರಿಕಾ ಅಸೋಸಿಯೇಷನ್ ಅಧ್ಯಕ್ಷ ಡಿಪಿ ದಾನಪ್ಪ, ಉಪಾಧ್ಯಕ್ಷ ಚಂದ್ರಶೇಖರ್.ಎಂ, ಮಂಡಳಿಯ ಪದಾಧಿಕಾರಿಗಳು, ಉದ್ಯಮಿಗಳು ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.

****************

ಪರಿಶಿಷ್ಟ ಜಾತಿಗಳ ಒಳಮೀಸಲಾತಿ ಜಾರಿಯಲ್ಲಿ ರಾಜ್ಯ ಸರ್ಕಾರವು ವಿಫಲವಾಗಿದ್ದು, ಸಾಮಾಜಿಕ ನ್ಯಾಯ ಒದಗಿಸುವ ಬದಲು ಗೊಂದಲ ಸೃಷ್ಟಿಸುತ್ತಿದೆ ಎಂದು ಆರೋಪಿಸಿ ಬಿಜೆಪಿ ನಿಯೋಗ ಇಂದು ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಅವರಿಗೆ ತಿಳಿವಳಿಕೆ ಪತ್ರ ಸಲ್ಲಿಸಿತು.

ಮಾಜಿ ಉಪಮುಖ್ಯಮಂತ್ರಿ ಮತ್ತು ಸಂಸದ ಗೋವಿಂದ ಕಾರಜೋಳ, ಮಾಜಿ ಕೇಂದ್ರ ಸಚಿವ ಎ.ನಾರಾಯಣ ಸ್ವಾಮಿ, ಶಾಸಕ ದುರ್ಯೋದನ್ ಐಹೊಳೆ, ಬಸವರಾಜ ಮತ್ತಿಮಡು ಮತ್ತು ನಿವೃತ್ತ ಐಎಎಸ್ ಅಧಿಕಾರಿ ಲಕ್ಷ್ಮೀ ನಾರಾಯಣ್ ಅವರನ್ನೊಳಗೊಂಡ ನಿಯೋಗವು, ಸುಪ್ರೀಂ ಕೋರ್ಟ್ ತೀರ್ಪು ನೀಡಿ ೧೮ ತಿಂಗಳು ಕಳೆದರೂ ಸರ್ಕಾರವು ವೈಜ್ಞಾನಿಕವಾಗಿ ಮೀಸಲಾತಿ ಹಂಚಿಕೆ ಮಾಡಿಲ್ಲ ಎಂದು ದೂರಿದೆ. ನ್ಯಾಯಮೂರ್ತಿ ನಾಗಮೋಹನ್ ದಾಸ್ ಸಮಿತಿಯ ಶಿಫಾರಸುಗಳನ್ನು ಬದಿಗಿಟ್ಟು ರಾಜಕೀಯ ಒತ್ತಡಕ್ಕೆ ಮಣಿದು ೬:೬:೫ ಅನುಪಾತದ ಮಾದರಿಯನ್ನು ಆತುರದಲ್ಲಿ ಜಾರಿಗೆ ತರಲಾಗಿದೆ ಎಂದು ನಿಯೋಗ ಆರೋಪಿಸಿದೆ.

ಈ ನಿರ್ಧಾರದಿಂದ ಅಲೆಮಾರಿ ಮತ್ತು ಸಣ್ಣ ಉಪಜಾತಿಗಳಿಗೆ ಅನ್ಯಾಯವಾಗಿದ್ದು, ರಾಜ್ಯಪಾಲರು ಮಧ್ಯಪ್ರವೇಶಿಸಿ ಎಲ್ಲಾ ಸಮುದಾಯಗಳಿಗೆ ನ್ಯಾಯ ಒದಗಿಸಬೇಕೆಂದು ಬಿಜೆಪಿ ಮುಖಂಡರು ಒತ್ತಾಯಿಸಿದ್ದಾರೆ.

****************

ಅರಣ್ಯದಂಚಿನ ಪ್ರದೇಶಗಳಲ್ಲಿ ವನ್ಯಜೀವಿಗಳ ಸಂಚಾರದ ಕುರಿತು ಸ್ಥಳೀಯರಿಗೆ ತಕ್ಷಣ ಮಾಹಿತಿ ರವಾನಿಸಲು ಕಟ್ಟುನಿಟ್ಟಿನ ಕ್ರಮ ಕೈಗೊಳ್ಳುವಂತೆ ಅರಣ್ಯ ಮತ್ತು ಪರಿಸರ ಸಚಿವ ಈಶ್ವರ ಖಂಡ್ರೆ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

ಚಿಕ್ಕಮಗಳೂರು ತಾಲ್ಲೂಕಿನ ಹುಣಸೆಹಳ್ಳಿ ಬಳಿ ಇತ್ತೀಚೆಗೆ ನಡೆದ ಆನೆ ದಾಳಿ ಪ್ರಕರಣಗಳ ಹಿನ್ನೆಲೆಯಲ್ಲಿ ಉನ್ನತಾಧಿಕಾರಿಗಳೊಂದಿಗೆ ವಿಡಿಯೋ ಕಾನ್ಫರೆನ್ಸ್ ಮೂಲಕ ತುರ್ತು ಸಭೆ ನಡೆಸಿದ ಸಚಿವರು, ಮಾನವ-ವನ್ಯಜೀವಿ ಸಂಘರ್ಷ ತಡೆಯಲು ಆಧುನಿಕ ತಂತ್ರಜ್ಞಾನ ಹಾಗೂ ಸ್ಥಳೀಯ ಸಂಪರ್ಕ ಜಾಲವನ್ನು ಬಳಸಿಕೊಳ್ಳುವಂತೆ ನಿರ್ದೇಶಿಸಿದರು.

ಅರಣ್ಯ ಇಲಾಖೆಯ ಮುನ್ನೆಚ್ಚರಿಕೆಯ ಹೊರತಾಗಿಯೂ ಕಾರ್ಮಿಕರನ್ನು ತೋಟಕ್ಕೆ ಕಳುಹಿಸುವ ಮಾಲೀಕರ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವಂತೆ ಅವರು ಎಚ್ಚರಿಕೆ ನೀಡಿದರು.

ಇದೇ ಸಂದರ್ಭದಲ್ಲಿ ನಾಗರಹೊಳೆ ಮತ್ತು ಬಂಡೀಪುರದಲ್ಲಿ ಸಫಾರಿ ಪುನಾರಂಭದ ಕುರಿತು ಮಾತನಾಡಿದ ಸಚಿವರು, ಸಫಾರಿಯಿಂದ ಬರುವ ಆದಾಯದ ಶೇಕಡಾ ೩೫ರಷ್ಟನ್ನು ಕಾಡಿನಂಚಿನ ಗ್ರಾಮಸ್ಥರ ಕಲ್ಯಾಣಕ್ಕಾಗಿ ಬಳಸಲಾಗುವುದು ಎಂದು ತಿಳಿಸಿದರು.

ಸಭೆಯಲ್ಲಿ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಮೀನಾಕ್ಷಿ ನೇಗಿ ಸೇರಿದಂತೆ ಹಲವು ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

****************

ಕಂದಾಯ ಸೇವೆಗಳನ್ನು ಪಾರದರ್ಶಕವಾಗಿ ಸಾರ್ವಜನಿಕರಿಗೆ ತಲುಪಿಸಲು ಅಧಿಕಾರಿಗಳು ಮತ್ತು ಸಿಬ್ಬಂದಿ ಹೊಸ ಕಾನೂನು, ನಿಯಮ ಮತ್ತು ತಾಂತ್ರಿಕ ಬದಲಾವಣೆಗಳ ಕುರಿತು

ತಿಳಿದುಕೊಳ್ಳುವುದು ಅವಶ್ಯವಾಗಿದೆ ಎಂದು ನಿವೃತ್ತ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಎಸ್.ಆರ್.ಸೋಮಶೇಖರ್ ಹೇಳಿದ್ದಾರೆ.

ಬೆಂಗಳೂರು ಗ್ರಾಮಾಂತರ ಜಿಲ್ಲಾಡಳಿತ ವತಿಯಿಂದ ಆಯೋಜಿಸಿದ್ದ "ಭೂಮಿ@೨೫" ಕುರಿತು ಜಿಲ್ಲಾ ಮಟ್ಟದ ಕಂದಾಯ ಇಲಾಖೆಯ ಕಾರ್ಯಗಾರವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಕಂದಾಯ ಅಧಿಕಾರಿಗಳು ಹಾಗೂ ಸಿಬ್ಬಂದಿ, ನ್ಯಾಯಾಲಯ ವ್ಯಾಪ್ತಿಯಲ್ಲಿ ಬರುವ ಪ್ರಕರಣಗಳಲ್ಲಿ ಪ್ರವೇಶಿಸಬಾರದು. ಸಂವಿಧಾನ ಹಾಗೂ ಕಾನೂನುಗಳ ಕುರಿತು ಅರಿತುಕೊಳ್ಳಬೇಕು. ಜಮೀನು, ಆಸ್ತಿ ವರ್ಗಾವಣೆಯಲ್ಲಿ ಖೊಟ್ಟಿ ದಾಖಲೆ ಸೃಷ್ಟಿಸುವವರ ಬಗ್ಗೆ ಗಮನ ಹರಿಸಿ ಅವುಗಳಿಗೆ ಕಡಿವಾಣ ಹಾಕಬೇಕು ಎಂದರು.

ಜಿಲ್ಲಾಧಿಕಾರಿ ಎ.ಬಿ ಬಸವರಾಜು ಮಾತನಾಡಿ, ಕಂದಾಯ ಇಲಾಖೆಯ ಯೋಜನೆಗಳು ಹಾಗೂ ಕಾರ್ಯಕ್ರಮಗಳನ್ನು ಯಶಸ್ವಿಯಾಗಿ ಜಾರಿಗೆ ತರಲು ತರಬೇತಿ ಕಾರ್ಯಗಾರ ಬಹಳಷ್ಟು ಉಪಯುಕ್ತವಾಗಿದ್ದು, ಇದರ ಸದುಪಯೋಗ ಪಡೆದುಕೊಳ್ಳಿ ಎಂದು ಸಿಬ್ಬಂದಿಗಳಿಗೆ ತಿಳಿಸಿದರು.

****************

ಬೆಂಗಳೂರಿನಲ್ಲಿರುವ ಭಾರತ ಸರ್ಕಾರದ ವಾರ್ತಾ ಶಾಖೆ-ಪಿಐಬಿ ಹಾಗೂ ಉಡುಪಿ ಜಿಲ್ಲಾಡಳಿತದ ಸಹಯೋಗದೊಂದಿಗೆ ಉಡುಪಿ ಮಾಧ್ಯಮ ಪ್ರತಿನಿಧಿಗಳಿಗಾಗಿ 'ವಾರ್ತಾಲಾಪ' ಕಾರ್ಯಾಗಾರವನ್ನು ಹಮ್ಮಿಕೊಳ್ಳಲಾಗಿದೆ.

ಉಡುಪಿಯ ಡಾ.ವಿ.ಎಸ್.ಆಚಾರ್ಯ ಸಭಾಂಗಣದಲ್ಲಿ ನಾಳೆ ಬೆಳಗ್ಗೆ ೧೦.೩೦ಕ್ಕೆ ನಡೆಯಲಿರುವ ಕಾರ್ಯಕ್ರಮದಲ್ಲಿ ಹಲವು ಗಣ್ಯರು ವಿವಿಧ ಕೇಂದ್ರ ಪುರಸ್ಕೃತ ಯೋಜನೆಗಳ ಕುರಿತು ಮಾಹಿತಿ ಹಂಚಿಕೊಳ್ಳಲಿದ್ದಾರೆ.

****************

ಐತಿಹಾಸಿಕ ಪರಂಪರೆ ಹಾಗೂ ಸಾಂಸ್ಕೃತಿಕ ವೈಭವದಿಂದ ಜಾಗತಿಕ ಮಟ್ಟದಲ್ಲಿ ಗುರುತಿಸಿಕೊಂಡಿರುವ ಮೈಸೂರು ನಗರದ ಸ್ವಚ್ಛತೆಯನ್ನು ಇನ್ನಷ್ಟು ಉತ್ತಮಪಡಿಸುವ

ಉದ್ದೇಶದಿಂದ ಮೈಸೂರು ಮಹಾನಗರ ಪಾಲಿಕೆಯು, ಆರು ಮಂದಿ ಸಾಧಕರನ್ನು 'ಸ್ವಚ್ಛತಾ ರಾಯಭಾರಿಗಳನ್ನಾಗಿ ನೇಮಕ ಮಾಡಿದೆ.

****************

ಹಾವೇರಿ ಜಿಲ್ಲೆಯಲ್ಲಿ ದರ ಕುಸಿತದಿಂದ ಆರ್ಥಿಕ ಸಂಕಷ್ಟಕ್ಕೆ ಸಿಲುಕಿದ್ದ ರೈತರ ಮೆಕ್ಕೆಜೋಳವನ್ನು ಖರೀದಿಸಲು ರಾಜ್ಯ ಸರ್ಕಾರ ಜಾರಿಗೆ ತಂದಿರುವ ಮಾರುಕಟ್ಟೆ ಮಧ್ಯಸ್ಥಿಕೆ ಯೋಜನೆ - ಎಂಐಎಸ್‌ಗೆ ಉತ್ತಮ ಸ್ಪಂದನೆ ವ್ಯಕ್ತವಾಗಿದೆ.

ರಾಜ್ಯದ ಜಿಲ್ಲೆಗಳ ಪೈಕಿ ಹಾವೇರಿ ಜಿಲ್ಲೆಯಲ್ಲಿಯೇ ಅತ್ಯಧಿಕ ೫೧ ಸಾವಿರ ೨೯೨ ರೈತರು ನೋಂದಣಿ ಮಾಡಿಕೊಂಡು, ಮೆಕ್ಕೆಜೋಳ ಮಾರಾಟ ಮಾಡಿ, ಸರ್ಕಾರದ ಸಹಾಯಧನ ಪಡೆಯಲು ಅರ್ಹತೆ ಗಿಟ್ಟಿಸಿಕೊಂಡಿದ್ದಾರೆ.

****************

ಸಮಗ್ರ ಶಿಕ್ಷಣ ಕರ್ನಾಟಕ ಮತ್ತು ಡಬ್ಲ್ಯೂ.ಡಬ್ಲ್ಯೂ.ಎಫ್ ಇಂಡಿಯಾ ಸಹಯೋಗದಲ್ಲಿ ಆಯೋಜಿಸಲಾಗಿದ್ದ 'ಮಿಷನ್ ಪ್ರಕೃತಿ' ಕಾರ್ಯಕ್ರಮದಲ್ಲಿ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವ ಮಧು ಬಂಗಾರಪ್ಪ ರಾಜ್ಯದ ಹತ್ತು ಅತ್ಯುತ್ತಮ ಶಾಲೆಗಳಿಗೆ ಪ್ರಶಸ್ತಿ ಪ್ರದಾನ ಮಾಡಿದರು.

****************

ಬೀದಿ ನಾಯಿಗಳ ಹಾವಳಿ ನಿಯಂತ್ರಣ ಸಂಬಂಧ ಸುಪ್ರೀಂಕೋರ್ಟ್  ಆದೇಶದ ಹಿನ್ನೆಲೆಯಲ್ಲಿ ಮಂಡ್ಯ ನಗರ ಹಾಗೂ ಗ್ರಾಮೀಣ ಸ್ಥಳೀಯ ಸಂಸ್ಥೆಗಳು ಹಾಗೂ ಸಂಬಂಧಿಸಿದ ಇಲಾಖೆ ಅಧಿಕಾರಿಗಳು ತಕ್ಷಣವೇ ಬೀದಿ ನಾಯಿಗಳ ನಿಯಂತ್ರಣಕ್ಕೆ ಕಾರ್ಯೋನ್ಮುಖರಾಗಬೇಕು ಎಂದು ಜಿಲ್ಲಾಧಿಕಾರಿ ಡಾ.ಕುಮಾರ ತಿಳಿಸಿದ್ದಾರೆ.

****************

ಗದಗ ಜಿಲ್ಲೆಯಲ್ಲಿ ಇದೇ ೨೮ ರಿಂದ ಮಾರ್ಚ ೧೭ ರ ವರೆಗೆ  ಜರಗುವ ದ್ವಿತೀಯ ಪಿ.ಯು.ಸಿ. ವಾರ್ಷಿಕ ಪರೀಕ್ಷೆಗಳನ್ನು ಸುವ್ಯವಸ್ಥಿತವಾಗಿ ನಡೆಸಲು ಎಲ್ಲ ಕ್ರಮಗಳನ್ನು ಕೈಗೊಳ್ಳಲಾಗಿದೆ ಎಂದು ಗದಗ ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ ತಿಳಿಸಿದ್ದಾರೆ.

********ಮುಕ್ತಾಯ********